**All India Radio: Bangalore**
**National Bulletin In Kannada**
**21.08.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.08.2026  07.35 a.m.**

****************

ಮುಖ್ಯಾಂಶಗಳು

೧.	ಅಧಿಕಾರಿಗಳು ವಿಶ್ವವಿದ್ಯಾಲಯಗಳು ಮತ್ತು ಯುವ ಸಮೂಹದೊಂದಿಗೆ ಹೆಚ್ಚಿನ ಒಡನಾಟ ಹೊಂದಬೇಕು: ಪ್ರಧಾನಿ ನರೇಂದ್ರ ಮೋದಿ

೨.	ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅಧ್ಯಕ್ಷತೆಯಲ್ಲಿ ಪುಣೆಯಲ್ಲಿಂದು ೧೨ ನೇ ಬ್ರಿಕ್ಸ್ ಸಂವಹನ ಸಚಿವರ ಸಭೆ

೩.	ಲಡಾಖ್‌ನಲ್ಲಿ ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್ ಪೀಠ ಸ್ಥಾಪಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ

೪.	ಎಚ್.ಐ.ಎಫ್ ವಿಶ್ವಕಪ್ ಹಾಕಿ ಟೂರ್ನಿ: ಇಂದು ಭಾರತ-ನೆದರ್ಲ್ಯಾಂಡ್ಸ್ ತಂಡಗಳ ಮುಖಾಮುಖಿ

****************

ಕೇಂದ್ರ ಸರ್ಕಾರದ ಕಾರ್ಯದರ್ಶಿಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿನ್ನೆ ತಮ್ಮ ನಿವಾಸದಲ್ಲಿ ಮೂರನೇ ಉನ್ನತ ಮಟ್ಟದ ಸಭೆ ನಡೆಸಿದರು.

ಮೂಲಸೌಕರ್ಯ ಮತ್ತು ಸಂಪರ್ಕ, ಭದ್ರತೆ, ವಿದೇಶಾಂಗ ವ್ಯವಹಾರಗಳು ಮತ್ತು ಆಡಳಿತವನ್ನು ನಿರ್ವಹಿಸುವ ಸಚಿವಾಲಯಗಳು ಮತ್ತು ಇಲಾಖೆಗಳ ಭವಿಷ್ಯದ ಕಾರ್ಯಸೂಚಿಯ ಕುರಿತು ಚರ್ಚಿಸಿದರು. ದೇಶದ ಭವಿಷ್ಯವನ್ನು ಹೇಗೆ ರೂಪಿಸಬೇಕು ಎಂಬ ಕುರಿತು ದೀರ್ಘಾವಧಿಯ ದೃಷ್ಟಿಕೋನದಿಂದ ಯೋಚಿಸುವಂತೆ ಅವರು ಕಾರ್ಯದರ್ಶಿಗಳನ್ನು ಒತ್ತಾಯಿಸಿದರು. ಹೆಚ್ಚಿನ ಪರಸ್ಪರ ಕಾರ್ಯಸಾಧ್ಯತೆ ಮತ್ತು ದತ್ತಾಂಶದ ಪರಿಣಾಮಕಾರಿ ಬಳಕೆಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು.

ಅಧಿಕಾರಿಗಳಲ್ಲಿ ಅನೌಪಚಾರಿಕ ಸಂವಹನ ಇರಬೇಕು. ಸಾಂಘಿಕ ಮನೋಭಾವವನ್ನು ನಿರ್ಮಿಸುವ ಮಹತ್ವದ ಬಗ್ಗೆ ತಿಳಿದುಕೊಳ್ಳಬೇಕು. ವಿಶ್ವವಿದ್ಯಾಲಯಗಳು ಮತ್ತು ಯುವಜನರ ನಡುವೆ ಹೆಚ್ಚಿನ ರೀತಿಯಲ್ಲಿ ತೊಡಗಿಸಿಕೊಳ್ಳುವಂತೆ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ರಕ್ಷಣಾ ಉದ್ಯಮವನ್ನು ಮತ್ತಷ್ಟು ಬಲಪಡಿಸುವ ಮತ್ತು ಜಾಗತಿಕ ಮಟ್ಟದಲ್ಲಿ ಅದನ್ನು ಹೆಚ್ಚು ಸ್ಪರ್ಧಾತ್ಮಕವಾಗಿಸುವ ಅಗತ್ಯವಿದೆ. ಕೃತಕ ಬುದ್ಧಿಮತ್ತೆಯ ಪರಿಣಾಮಕಾರಿ ಬಳಕೆಗೆ ಮತ್ತು ಎಐ ಸಾಮರ್ಥ್ಯಗಳನ್ನು ಮಾನವ ಪರಿಣತಿಯೊಂದಿಗೆ ಸಂಯೋಜಿಸುವ ನವೀನ ಮಾರ್ಗಗಳನ್ನು ಅನ್ವೇಷಿಸಬೇಕು. ಸಂಕೀರ್ಣ ಸವಾಲುಗಳನ್ನು ಎದುರಿಸಲು ಮತ್ತು ದೀರ್ಘಾವಧಿಯ ದೃಷ್ಟಿಕೋನದೊಂದಿಗೆ ಭಾರತದ ಭವಿಷ್ಯವನ್ನು ರೂಪಿಸಲು ಹೆಚ್ಚಿನ ಸಮನ್ವಯತೆ ಜೊತೆಗೆ ನವೀನ ಚಿಂತನೆ ಮತ್ತು ಸಾಮೂಹಿಕ ಮಾಲೀಕತ್ವದ ಅಗತ್ಯವನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದ್ದಾರೆ.

****************

ಭಾರತಕ್ಕೆ ಭೇಟಿ ನೀಡಿರುವ ಜಪಾನ್ ರಕ್ಷಣಾ ಸಚಿವ ಶಿಂಜಿರೊ ಕೊಯಿಜುಮಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ದೆಹಲಿಯಲ್ಲಿ ನಿನ್ನೆ ಭೇಟಿ ಮಾಡಿದರು.

ಭಾರತ ಮತ್ತು ಜಪಾನ್ ನಡುವಿನ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬಗ್ಗೆ ಉಭಯ ನಾಯಕರು ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಇಂಡೋ-ಪೆಸಿಫಿಕ್ ಮತ್ತು ಅದರಾಚೆಗೆ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಯನ್ನು ಹೆಚ್ಚಿಸುವಲ್ಲಿ ಭಾರತ-ಜಪಾನ್ ರಕ್ಷಣಾ ಮತ್ತು ಭದ್ರತಾ ಸಹಕಾರದ ಮಹತ್ವವನ್ನು ಈ ಸಮಾಲೋಚನೆ ಅನಾವರಣಗೊಳಿಸುತ್ತದೆ. ರಕ್ಷಣಾ ವಲಯದಲ್ಲಿ ಭಾರತೀಯ ಕಂಪನಿಗಳು ಮತ್ತು ನವೋದ್ಯಮಗಳೊಂದಿಗೆ ವಿಶೇಷವಾಗಿ 'ಮೇಕ್ ಇನ್ ಇಂಡಿಯಾ' ಆಶ್ರಯದಲ್ಲಿ ಸಹ-ಅಭಿವೃದ್ಧಿ ಮತ್ತು ಸಹ-ಉತ್ಪಾದನೆಗಾಗಿ ಜಪಾನ್ ಪಾಲುದಾರಿಕೆ ಮಾಡಿಕೊಳ್ಳಲು ಲಭ್ಯವಿರುವ ಅವಕಾಶಗಳ ಬಗ್ಗೆ ಪ್ರಧಾನಿ ಈ ಸಂದರ್ಭದಲ್ಲಿ ಮಾಹಿತಿ ನೀಡಿದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ  ಮೋದಿ, ಭಾರತ ಮತ್ತು ಜಪಾನ್ ನಡುವಿನ ರಕ್ಷಣಾ ಮತ್ತು ಭದ್ರತಾ ಸಂಬಂಧಗಳನ್ನು ಗಾಢಗೊಳಿಸುವ

ಕುರಿತು ಅತ್ಯುತ್ತಮ ಸಂಭಾಷಣೆ ನಡೆಸಿದ್ದೇವೆ. ಇಂಡೋ-ಪೆಸಿಫಿಕ್ ಮತ್ತು ಅದರಾಚೆಗಿನ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಎರಡೂ ರಾಷ್ಟ್ರಗಳ ನಡುವಿನ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆ ಪ್ರಮುಖ ಆಧಾರವಾಗಿದೆ ಎಂದು ಹೇಳಿದ್ದಾರೆ.

***************

೧೨ ನೇ ಬ್ರಿಕ್ಸ್ ಸಂವಹನ ಸಚಿವರ ಸಭೆಯನ್ನು ಭಾರತ ಆಯೋಜಿಸಿದ್ದು, ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರ ಅಧ್ಯಕ್ಷತೆಯಲ್ಲಿಂದು ಪುಣೆಯಲ್ಲಿ ಸಭೆ ನಡೆಯಲಿದೆ.

ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ, ಡಿಜಿಟಲ್ ರೂಪಾಂತರ, ನಾವೀನ್ಯತೆ ಮತ್ತು  ಡಿಜಿಟಲ್ ಮೂಲಸೌಕರ್ಯದಲ್ಲಿ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚೆ ನಡೆಯಲಿದೆ. ನಾವೀನ್ಯತೆ, ಸಹಕಾರ ಮತ್ತು ರೂಪಾಂತರ ಎಂಬುದು ಸಭೆಯ ಪ್ರಮುಖ ಕಾರ್ಯಸೂಚಿಯಾಗಿದೆ. ಈ ಕಾರ್ಯಕ್ರಮವು ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಉದಯೋನ್ಮುಖ ತಂತ್ರಜ್ಞಾನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಭವಿಷ್ಯದ ಸಂಪರ್ಕ ವ್ಯವಸ್ಥೆ, ಸೈಬರ್ ಭದ್ರತೆ, ಸಾಮರ್ಥ್ಯ ವೃದ್ಧಿ ಮತ್ತು ಅಂತರ್ಗತ ಡಿಜಿಟಲ್ ಸಂಪರ್ಕದ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ವೇದಿಕೆಯನ್ನು ಒದಗಿಸುತ್ತದೆ.

***************

ಲಡಾಖ್‌ನಲ್ಲಿ ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್‌ನ ಪೀಠ ಸ್ಥಾಪಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಮಾಹಿತಿ ಹಂಚಿಕೊಂಡಿದ್ದಾರೆ. ಈ ನಿರ್ಧಾರವು ಲಡಾಖ್‌ನ ದೂರದ ಪ್ರದೇಶಗಳಲ್ಲಿನ ನಾಗರಿಕರಿಗೆ ನ್ಯಾಯದಾನದ ಪ್ರವೇಶವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ ಮತ್ತು ಅವರು ಅರ್ಹ ಕಾನೂನು ಸೇವೆಗಳನ್ನು ಪಡೆಯಲು ಸಮಯವನ್ನು ಕಡಿಮೆ ಮಾಡುತ್ತದೆ. ಲಡಾಖ್‌ನ ಸರ್ವತೋಮುಖ ಅಭಿವೃದ್ಧಿಗೆ ಮತ್ತು ಸಾಂವಿಧಾನಿಕ ಸುರಕ್ಷತೆಗಳನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಎಂದು ಅಮಿತ್ ಶಾ ಹೇಳಿದ್ದಾರೆ.

***************

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ -ಎನ್.ಟಿ.ಎ ತನ್ನ 'ಕಿ ಉತ್ತರದ ಬಗ್ಗೆ ಆಕ್ಷೇಪಣೆ ಸಲ್ಲಿಸಲು "ಆನ್ಸರ್ ಕೀ ಚಾಲೆಂಜ್" ಎಂಬ ವ್ಯವಸ್ಥೆಯನ್ನು ವಿದ್ಯಾರ್ಥಿಗಳಿಗಾಗಿ ವಿನ್ಯಾಸಗೊಳಿಸಿದೆ. ಈ ವ್ಯವಸ್ಥೆ ದುಬಾರಿಯಾಗಿದೆ ಎಂಬ ಕಳವಳಗಳನ್ನು ಎನ್.ಟಿ.ಎ ತಿರಸ್ಕರಿಸಿದೆ.

ಇದು ಒಂದು ಆನ್‌ಲೈನ್ ಪ್ರಕ್ರಿಯೆಯಾಗಿದ್ದು, ಅಲ್ಲಿ ಎಇಇ ಮುಖ್ಯ, ಓಇಇಖಿ, ಅಥವಾ Uಉಅ ಓಇಖಿ ನಂತಹ ಪರೀಕ್ಷೆಗಳನ್ನು ತೆಗೆದುಕೊಳ್ಳುವ ಅಭ್ಯರ್ಥಿಗಳು ತಾತ್ಕಾಲಿಕ ಕೀ ಉತ್ತರದ ದೋಷಗಳ ಬಗ್ಗೆ ಆಕ್ಷೇಪ ಸಲ್ಲಿಸಬಹುದು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಓಖಿಂ ಹೇಳುವಂತೆ, ಒಬ್ಬ ಅಭ್ಯರ್ಥಿಯು ಪ್ರಶ್ನೆಯನ್ನು ಪ್ರಶ್ನಿಸಿದರೆ ಮತ್ತು ವಿಷಯ ತಜ್ಞರು ಸವಾಲನ್ನು ಸ್ವೀಕರಿಸಿದರೆ, ಪರಿಷ್ಕೃತ ಉತ್ತರ ಕೀ ಪರೀಕ್ಷೆ ಬರೆದ ಪ್ರತಿಯೊಬ್ಬ ಅಭ್ಯರ್ಥಿಗೂ ಅದು ಅನ್ವಯವಾಗಲಿದೆ.

ಅನಗತ್ಯ ಸವಾಲುಗಳನ್ನು ನಿರುತ್ಸಾಹಗೊಳಿಸಲು ಇದಕ್ಕಾಗಿ ಶುಲ್ಕವನ್ನು ವಿಧಿಸಲಾಗುತ್ತದೆ ಮತ್ತು ಸವಾಲು ಸರಿಯಾಗಿದ್ದರೆ ಶುಲ್ಕವನ್ನು ಮರುಪಾವತಿಸಲಾಗುತ್ತದೆ. ಪ್ರತಿ ಪ್ರಶ್ನೆಗೆ ೧೦೦ ರೂಪಾಯಿ ದರ ನಿಗದಿಪಡಿಸಲಾಗಿದೆ. ಯಾವುದೇ ಅಭ್ಯರ್ಥಿಯಿಂದ ನಿಖರವಾದ ಸವಾಲು ಎದುರಾದರೆ ಲಕ್ಷಾಂತರ ಇತರರಿಗೆ ದಾಖಲೆಯನ್ನು ಸರಿಪಡಿಸಲು ನೆರವಾಗಲಿದೆ ಎಂದು ಎನ್.ಟಿ.ಎ ಹೇಳಿದೆ.

***************

ಇಂದು ವರಮಹಾಲಕ್ಷ್ಮೀ ಹಬ್ಬ. ನಾಡಿನಾದ್ಯಂತ, ಸಂಭ್ರಮ ಮನೆ ಮಾಡಿದೆ. ಮನೆ ದೇವಾಲಯಗಳಲ್ಲಿ, ಬೆಳಗ್ಗೆಯಿಂದಲೇ ಪೂಜಾ ಕೈಂಕರ್ಯಗಳು ಆರಂಭಗೊಂಡಿವೆ.

ತಳಿರು-ತೋರಣ, ಬಾಳೆ ಕಂಬ, ಸಾಲು ದೀಪಗಳು, ಹೂ ಮಾಲೆಗಳ ಅಲಂಕಾರಗಳಿಂದ, ವರಮಹಾಲಕ್ಷ್ಮೀ ಪ್ರಾಣ ಪ್ರತಿಷ್ಠಾಪನೆಗೊಂಡು, ದೈವಕಳೆ ಮೇಳೈಸಿದೆ.

ಬೆಲೆ ಏರಿಕೆಯ ಮಧ್ಯೆಯೂ, ವರ ಮಹಾಲಕ್ಷ್ಮೀ ಹಬ್ಬದ ಅಗತ್ಯ ವಸ್ತುಗಳ ಖರೀದಿ ಭರಾಟೆ ಇಂದೂ ಸಹ ಜೋರಾಗಿದೆ.

***************

ಈ ವರ್ಷದ ಅಕ್ಟೋಬರ್ ೩೧ ರವರೆಗೆ ೧೦ ಲಕ್ಷ ಮೆಟ್ರಿಕ್ ಟನ್ ಕಚ್ಚಾ ಸಕ್ಕರೆಯನ್ನು ಸುಂಕ ರಹಿತವಾಗಿ ಆಮದು ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡಿದೆ.

ವಿದೇಶಿ ವ್ಯಾಪಾರ ನಿರ್ದೇಶನಾಲಯ ಈ ಕುರಿತು ಅಧಿಸೂಚನೆ ಹೊರಡಿಸಿದೆ. ನಿರ್ದಿಷ್ಟ ಷರತ್ತುಗಳಿಗೆ ಒಳಪಟ್ಟು ೧೦ ಲಕ್ಷ ಮೆಟ್ರಿಕ್ ಟನ್ ಕಚ್ಚಾ ಸಕ್ಕರೆಯನ್ನು ಸುಂಕವಿಲ್ಲದೆ ಆಮದು ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಹಬ್ಬದ ಋತುವಿಗೆ ಮುಂಚಿತವಾಗಿ ಈ ಕ್ರಮ ಕೈಗೊಳ್ಳಲಾಗಿದೆ, ಹಬ್ಬದ ಸಂದರ್ಭದಲ್ಲಿ ಸಕ್ಕರೆ ಬೇಡಿಕೆ ಸಾಮಾನ್ಯವಾಗಿ ಹೆಚ್ಚಿರುತ್ತದೆ. ಭಾರತ ವಿಶ್ವದ ಎರಡನೇ ಅತಿದೊಡ್ಡ ಸಕ್ಕರೆ ಉತ್ಪಾದಕ ರಾಷ್ಟ್ರವಾಗಿದೆ.

***************

ಆಮ್ಸ್ಟೆಲ್ವೀನ್‌ನಲ್ಲಿ ನಡೆಯುತ್ತಿರುವ ಎಫ್‌ಐಎಚ್ ವಿಶ್ವಕಪ್ ಹಾಕಿ ಟೂರ್ನಿಯ ಪೂಲ್ ಬಿ ಗುಂಪಿನ ಮೊದಲ ಪಂದ್ಯದಲ್ಲಿ ಭಾರತೀಯ ಮಹಿಳಾ ತಂಡವು ಇಂದು ನೆದರ್ಲ್ಯಾಂಡ್ಸ್ ವಿರುದ್ಧ ಸೆಣಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ರಾತ್ರಿ ೯:೩೦ ಕ್ಕೆ ಆರಂಭವಾಗಲಿದೆ.

ಇದಕ್ಕೂ ಮೊದಲು, ನಿನ್ನೆ ನಡೆದ ಪೂಲ್ ಡಿ ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಗೋಲುರಹಿತ ಡ್ರಾ ಸಾಧಿಸಿದ ನಂತರ ಭಾರತ ಎರಡನೇ ಸುತ್ತಿಗೆ ಮುನ್ನಡೆದಿದೆ. ಎರಡೂ ತಂಡಗಳು ಅವಕಾಶಗಳನ್ನು ಸೃಷ್ಟಿಸಿಕೊಂಡವು. ಆದರೆ ಗೋಲು ಗಳಿಸುವಲ್ಲಿ ವಿಫಲವಾದವು,

ಭಾರತದ ರಕ್ಷಣಾ ವಿಭಾಗವು ಸ್ಪರ್ಧೆಯ ಉದ್ದಕ್ಕೂ ದೃಢವಾಗಿತ್ತು. ವಿಶೇಷವಾಗಿ ದ್ವಿತೀಯಾರ್ಧದಲ್ಲಿ ಭಾರತವು ಇಂಗ್ಲೆಂಡ್‌ನಿಂದ ಅನೇಕ ಪೆನಾಲ್ಟಿ ಕಾರ್ನರ್‌ಗಳನ್ನು ತಡೆದಿತು. ಸಲೀಮಾ ಟೆಟೆ ನೇತೃತ್ವದ ಭಾರತ ಪೂಲ್ ಡಿಯಲ್ಲಿ ಪ್ರಮುಖ ಎರಡನೇ ಸ್ಥಾನವನ್ನು ಗಳಿಸಲು ಈ ಡ್ರಾ ನೆರವಾಯಿತು.

***************

ನವದೆಹಲಿಯಲ್ಲಿ ನಡೆಯುತ್ತಿರುವ ಬಿಡಬ್ಲ್ಯೂಎಫ್ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್ ನ ಪುರುಷರ ಮತ್ತು ಮಹಿಳೆಯರ ಡಬಲ್ಸ್ ಕ್ವಾರ್ಟರ್ ಫೈನಲ್ಸ್ ನಲ್ಲಿ ಭಾರತೀಯ ಶಟ್ಲರ್‌ಗಳು ಇಂದು

ಸ್ಪರ್ಧಿಸಲಿದ್ದಾರೆ. ಪುರುಷರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಮೂರನೇ ಶ್ರೇಯಾಂಕದ ಚೀನಾದ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್ ಚಾಂಗ್ ಅವರ ವಿರುದ್ಧ ಹೋರಾಡಲಿದ್ದಾರೆ. ಈ ಜೋಡಿ ಪ್ರಿ-ಕ್ವಾರ್ಟರ್ ಫೈನಲ್ಸ್ ನಲ್ಲಿ ಮಲೇಷ್ಯಾದ ಜುನೈದಿ ಆರಿಫ್ ಮತ್ತು ರಾಯ್ ಕಿಂಗ್ ಯಾಪ್ ಅವರನ್ನು ೨೧-೨೩, ೨೧-೧೯, ೨೧-೧೭ ಸೆಟ್‌ಗಳಿಂದ ಸೋಲಿಸಿತು.

ಮಹಿಳಾ ಡಬಲ್ಸ್‌ನಲ್ಲಿ, ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಅವರನ್ನೊಳಗೊಂಡ ಭಾರತದ ಜೋಡಿ ನಾಲ್ಕನೇ ಶ್ರೇಯಾಂಕದ ಚೀನಾದ ಜಿಯಾ ಯಿ ಫ್ಯಾನ್ ಮತ್ತು ಜಾಂಗ್ ಶು ಕ್ಸಿಯಾನ್ ಜೋಡಿಯನ್ನು ಎದುರಿಸಲಿದೆ.

ಏತನ್ಮಧ್ಯೆ, ಮಾಜಿ ವಿಶ್ವ ಚಾಂಪಿಯನ್ ಪಿವಿ ಸಿಂಧು, ಪುರುಷರ ಸಿಂಗಲ್ಸ್ ಶಟ್ಲರ್ ಆಯುಷ್ ಶೆಟ್ಟಿ ಮತ್ತು ಮಿಶ್ರ ಡಬಲ್ಸ್ ಜೋಡಿ ಧ್ರುವ ಕಪಿಲಾ ಮತ್ತು ತನಿಶಾ ಕ್ರಾಸ್ಟೊ ತಮ್ಮ ಪ್ರಿ-ಕ್ವಾರ್ಟರ್ ಫೈನಲ್ಸ್ ಹಣಾಹಣಿಯಲ್ಲಿ ಸೋಲುಂಡರು. ಇದರಿಂದಾಗಿ ಆಯಾ ವಿಭಾಗಗಳಲ್ಲಿ ಭಾರತದ ಯಾನ ಕೊನೆಗೊಂಡಿತು. ಮಹಿಳಾ ಸಿಂಗಲ್ಸ್ ನಲ್ಲಿ ಪಿವಿ ಸಿಂಧು ಮೂರನೇ ಶ್ರೇಯಾಂಕದ ವಾಂಗ್ ಝಿ ಯಿ ವಿರುದ್ಧ ಪರಾಭವಗೊಂಡರು. ಪುರುಷರ ಸಿಂಗಲ್ಸ್ ನಲ್ಲಿ ಆಯುಷ್ ಶೆಟ್ಟಿ ಅವರನ್ನು ಇಂಡೋನೇಷ್ಯಾದ ಅಲ್ವಿ ಫರ್ಹಾನ್ ಸೋಲಿಸಿದರು.

***************

ನೈಜೀರಿಯಾದ ವಾಯುವ್ಯ ಸೊಕೊಟೊ ರಾಜ್ಯದ ನದಿಯಲ್ಲಿ ದೋಣಿಯೊಂದು ಮುಳುಗಿ ಕನಿಷ್ಠ ೪೭ ಜನರು ಸಾವನ್ನಪ್ಪಿದ್ದಾರೆ.

ದೋಣಿಯಲ್ಲಿದ್ದ ೮೦ ಕ್ಕೂ ಹೆಚ್ಚು ಜನರು ಗೊರೌ ಪಟ್ಟಣದಲ್ಲಿ ಕೆಲಸಕ್ಕಾಗಿ ತೆರಳುತ್ತಿದ್ದರು. ನೈಜೀರಿಯಾದಲ್ಲಿ ವಿಶೇಷವಾಗಿ ಮಳೆಗಾಲದಲ್ಲಿ ದೋಣಿ ಅಪಘಾತಗಳು ಸಾಮಾನ್ಯವಾಗಿದೆ. ಈ ವರ್ಷದ ಜನವರಿಯಲ್ಲಿ ಯೋಬೆ ರಾಜ್ಯದಲ್ಲಿ ಇದೇ ರೀತಿಯ ದುರಂತದಲ್ಲಿ ೨೫ ಜನ ಸಾವನ್ನಪ್ಪಿದ್ದರು.

***************

ಸೊಮಾಲಿಯಾದ ಪಂಟ್ಲ್ಯಾಂಡ್ ಕರಾವಳಿಯಲ್ಲಿ ಕಡಲ್ಗಳ್ಳರು ಅಪಹರಿಸಿದ ಕ್ಯಾಮರೂನ್ ಧ್ವಜ ಹೊತ್ತ ಸರಕು ಸಾಗಾಣೆ ಹಡಗಿನಲ್ಲಿದ್ದ ೧೦ ಸದಸ್ಯರ ಸಿಬ್ಬಂದಿಯಲ್ಲಿ ಆರು ಭಾರತೀಯರು ಸೇರಿದ್ದಾರೆ.

ಈ ಹಡಗನ್ನು ಸೋಮವಾರ ವಶಪಡಿಸಿಕೊಳ್ಳಲಾಯಿತು. ಮೊಗಾದಿಶುವಿನ ಮಿಲಿಟರಿ ತರಬೇತಿ ಕೇಂದ್ರಕ್ಕೆ ಟರ್ಕಿ ದೇಶದ ಶಸ್ತ್ರಾಸ್ತ್ರಗಳು, ಸಂವಹನ ಮತ್ತು ಉಪಗ್ರಹ ಉಪಕರಣಗಳನ್ನು ಈ ಹಡಗಿನಲ್ಲಿ ಸಾಗಿಸಲಾಗುತ್ತಿತ್ತು.

ಒಬ್ಬ ಟರ್ಕಿಶ್ ಪ್ರಜೆ, ಒಬ್ಬ ಜಾರ್ಜಿಯನ್ ಮತ್ತು ಇಬ್ಬರು ಸೆರ್ಬಿಯನ್ ಭದ್ರತಾ ಸಿಬ್ಬಂದಿ ಹಡಗಿನಲ್ಲಿ ಇದ್ದರು.

******** ಮುಕ್ತಾಯ *******